# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part –IV A | *ಬೆಂಗಳೂರು*, ಶುಕ್ರವಾರ, ೦೬, ನವೆಂಬರ್, ೨೦೨೦ (ಕಾರ್ತಿಕ, ೧೫, *ಶಕವರ್ಷ, ೧೯೪೨*)<br>BENGALURU, FRIDAY, 06, NOVEMBER, 2020 ( Karthika, 15, SHAKAVARSHA, 1942) | ನಂ. ೫೨೨<br>No. 522 |
|---|---|---|


**ಕರ್ನಾಟಕ ಸರ್ಕಾರ**

**ಸಂಖ್ಯೆ: ಕಾಇ 66 ಕಾಬಾನಿ 2020 (ಭಾಗ–1)**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ವಿಕಾಸಸೌಧ,**
**ಬೆಂಗಳೂರು, ದಿನಾಂಕ: 06/11/2020**

**ಮ ನ ವಿ**

**ವಿಷಯ: ಕೋವಿಡ್–19 ಸಾಂಕ್ರಾಮಿಕ ರೋಗದಿಂದ ಬಾಧಿತರಾದ ನೌಕರರು / ಕಾರ್ಮಿಕರಿಗೆ ಕ್ವಾರಂಟೈನ್ ರಜೆಯನ್ನು ನೀಡುವ ಕುರಿತು.**

* * * * *

ಕೋವಿಡ್–19 ಸಾಂಕ್ರಾಮಿಕ ರೋಗವು ಸಮಾಜಕ್ಕೆ ಒಂದು ಸವಾಲಾಗಿ ಪರಿಣಮಿಸಿದೆ. ಕೊರೊನಾ ವೈರಸ್‌ನಿಂದ ಬಾಧಿತರಾಗುವ ವ್ಯಕ್ತಿಗಳು ಕ್ವಾರಂಟೈನ್‌ನಲ್ಲಿರಬೇಕಾಗುತ್ತದೆ. ಆ ಸಂದರ್ಭದಲ್ಲಿ ರೋಗಿಯು ಪ್ರತ್ಯೇಕವಾಗಿ ಇರಬೇಕಾದ ಅಗತ್ಯತೆ ಇರುತ್ತದೆ.

ಈ ನಿಟ್ಟಿನಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ಸಾರ್ವಜನಿಕ ಹಿತಾಸಕ್ತಿಯ ರಿಟ್ ಅರ್ಜಿ ಸಂಖ್ಯೆ:9009/2020ರಲ್ಲಿ ದಿನಾಂಕ:21–10–2020ರಲ್ಲಿ ನೀಡಿರುವ ನಿರ್ದೇಶನದನ್ವಯ, ಕರ್ನಾಟಕ ಸರ್ಕಾರದ ಪರವಾಗಿ ಎಲ್ಲಾ ಸಾರ್ವಜನಿಕ / ಖಾಸಗಿ ಸಂಸ್ಥೆಗಳ ಉದ್ಯೋಗದಾತರನ್ನು ಈ ಕೆಳಕಂಡಂತೆ ಮನವಿ ಮಾಡಲಾಗಿದೆ.

1. ಕೊರೋನಾ ರೋಗದಿಂದ ಬಾಧಿತರಾದ ನೌಕರರು / ಕಾರ್ಮಿಕರು ಕ್ವಾರೆಂಟೈನ್‌ನಲ್ಲಿ ಇರುವ ಅವಧಿಯನ್ನು ಅನಧಿಕೃತ ಗೈರು ಹಾಜರಿ ಎಂದು ಪರಿಗಣಿಸದಿರುವುದು.

2. ಕೊರೋನಾ ರೋಗದಿಂದ ಬಾಧಿತರಾದ ನೌಕರರು / ಕಾರ್ಮಿಕರಿಗೆ ಅವರ ಹಕ್ಕಿನಲ್ಲಿರುವ ರಜೆಗಳನ್ನು ಉಪಯೋಗಿಸಿಕೊಳ್ಳಲು ಅನುವು ಮಾಡಿಕೊಡುವುದು.

3. ಇ.ಎಸ್.ಐ. ವ್ಯಾಪ್ತಿಗೆ ಒಳಪಡದ ಕೊರೋನಾ ರೋಗದಿಂದ ಬಾಧಿತರಾದ ನೌಕರರು / ಕಾರ್ಮಿಕರಿಗೆ ಸಾಮಾಜಿಕ ಹಿತಾಸಕ್ತಿಯನ್ನು ಗಮನದಲ್ಲಿರಿಸಿಕೊಂಡು ಸ್ವಇಚ್ಛೆಯಿಂದ ಕ್ವಾರೆಂಟೈನ್ ಅವಧಿಗೆ ಅವರ ಹಕ್ಕಿನಲ್ಲಿ ಲಭ್ಯವಿರುವ ರಜೆಯನ್ನು ಮಂಜೂರು ಮಾಡುವುದು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



4. ಕೊರೋನಾ ಬಾಧಿತ ನೌಕರರು / ಕಾರ್ಮಿಕರು ಅವರ ಖಾತೆಯಲ್ಲಿ ರಜೆ ಇಲ್ಲದಿದ್ದಲ್ಲಿ, ಇತರ ಕಾರ್ಮಿಕರ ರಜೆಯನ್ನು ವರ್ಗಾಯಿಸಿಕೊಂಡು ನಿಯಮಾನುಸಾರ ಉಪಯೋಗಿಸಿಕೊಳ್ಳಲು ಅನುವು ಮಾಡಿಕೊಡುವುದು.

5. ಕಾರ್ಮಿಕರ ಹಕ್ಕಿನಲ್ಲಿ ರಜೆಯು ಇಲ್ಲದಿದ್ದ ಪಕ್ಷದಲ್ಲಿ / ರಜೆಯನ್ನು ಈಗಾಗಲೇ ಸಂಪೂರ್ಣವಾಗಿ ಬಳಸಿಕೊಂಡಿದ್ದಲ್ಲಿ ಮುಂದಿನ ದಿನಗಳಲ್ಲಿ ಅವರು ಅರ್ಜಿಸಬಹುದಾದ ರಜೆಯನ್ನು ಮುಂಗಡವಾಗಿ ಉಪಯೋಗಿಸಿಕೊಳ್ಳಲು ಅವಕಾಶ ಕಲ್ಪಿಸುವುದು.

6. ಮಾಲೀಕರು ಸ್ವ–ಇಚ್ಛೆಯಿಂದ ರಜೆ ಮಂಜೂರು ಮಾಡಲು ಅವಕಾಶವಾಗದಿದ್ದಲ್ಲಿ/ ಸಾಧ್ಯವಿಲ್ಲದಿದ್ದಲ್ಲಿ/ ಕಾರ್ಮಿಕರ ಹಕ್ಕಿನಲ್ಲಿ ರಜೆ ಇಲ್ಲದಿದ್ದಲ್ಲಿ ಸದರಿ ಅವಧಿಗೆ ವಿಶೇಷ ರಜೆಯನ್ನು ನೀಡುವ ಕುರಿತು ಮಾಲೀಕರು ಮತ್ತು ಕಾರ್ಮಿಕರು ಉಭಯ ಸಮಾಲೋಚನೆ ನಡೆಸಿ ಬಗೆಹರಿಸಿಕೊಳ್ಳುವುದು.

(ಡಾ:ರಾಜಕುಮಾರ್ ಖತ್ರಿ)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE
Digitally signed by SUNIL GARDE
Date: 2020.11.06 17:42:12 +05'30'